## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಂ. ನಾಗರಾಜು ಇವರ ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ

**ವಿಷಯ:**

ಕರ್ನಾಟಕ ರಾಜ್ಯದಲ್ಲಿ 1972 ರಿಂದ 2012 ರವರೆಗೆ ಪ್ರವರ್ಗ-1 ಜಾತಿಯ ವಿದ್ಯಾರ್ಥಿಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶುಲ್ಕ ವಿನಾಯಿತಿ ಸಂಪೂರ್ಣ ಶಿಕ್ಷಣ ಸೌಲಭ್ಯ ನೀಡಬೇಕೆನ್ನುವ ಕುರಿತು ನಿಯಮ 72ರಲ್ಲಿ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಹೇಳಿಕೆ:**

ಸರ್ಕಾರದ ಆದೇಶ ಸಂಖ್ಯೆ: ಸಕಇ 28 ಬಿಸಿಎ 2012, ದಿನಾಂಕ:19.06.2012ರನ್ವಯ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ 'ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ' ಯನ್ನು ಸೃಜಿಸಿ, ಪ್ರವರ್ಗ-1ನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡಿಸಲಾಗಿರುತ್ತದೆ. 2013ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ದಿನಾಂಕ: 05.10.2013. ರಲ್ಲಿನ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸಲಾಗುತ್ತಿದೆ .

ಪ್ರವರ್ಗ-1 ರಲ್ಲಿನ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಹಾಗೂ ಶಿಕ್ಷಣ ಸೌಲಭ್ಯ ನೀಡಲು ಮತ್ತು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿಯಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ರೂ.2.50 ಲಕ್ಷಗಳ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ. ಸದರಿ ಕಾರ್ಯಕ್ರಮದಡಿಯಲ್ಲಿ ಈ ಕೆಳಕಂಡಂತೆ ಕೋರ್ಸ್ ವಾರು ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.

| ಕೋರ್ಸ್ ಗ್ರೂಪ್ | ವಿದ್ಯಾರ್ಥಿವೇತನ (ರೂ.ಗಳಲ್ಲಿ) |
|---|---|
| ಗ್ರೂಪ್-ಎ | 3500/- |
| ಗ್ರೂಪ್-ಬಿ | 3350/- |
| ಗ್ರೂಪ್-ಸಿ | 2100/- |
| ಗ್ರೂಪ್-ಡಿ | 1600/- |

2) ಶುಲ್ಕ ಮರುಪಾವತಿ ಮತ್ತು ವಿನಾಯತಿ ಯೋಜನೆಯಡಿಯಲ್ಲಿ ಶುಲ್ಕ ಮರುಪಾವತಿ ಮಂಜೂರು ಮಾಡಲು ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷದ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ. ಸದರಿ ಯೋಜನೆಯಡಿಯಲ್ಲಿ ಪ್ರವರ್ಗ-1ರ ಹೊಸ ವಿದ್ಯಾರ್ಥಿಗಳಿಗೆ ಶೇ.40% ಅಂಕಗಳನ್ನು ಹಾಗೂ ನವೀಕರಣ ವಿದ್ಯಾರ್ಥಿಗಳಿಗೆ ಶೇ.50% ಅಂಕಗಳನ್ನು ನಿಗದಿಪಡಿಸಲಾಗಿದೆ. ಮುಂದುವರೆದು, ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆಯಲ್ಲಿ ಶುಲ್ಕ ಮರುಪಾವತಿಯನ್ನು ಮಾಡಲಾಗುತ್ತಿದೆ.

2...

ಶುಲ್ಕ ವಿನಾಯಿತಿ ಯೋಜನೆಯಡಿಯಲ್ಲಿ ಒಟ್ಟು 5 ಶುಲ್ಕಗಳು 1)ಭೋದನಾ ಶುಲ್ಕ, 2) ಪ್ರಯೋಗಾಲಯ ಶುಲ್ಕ, 3)ಪರೀಕ್ಷಾ ಶುಲ್ಕ, 4)ಕ್ರೀಡಾ ಶುಲ್ಕ ಹಾಗೂ 5)ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿ ಮಾಡಲಾಗುತ್ತಿದೆ. ಈ 5 ಶುಲ್ಕಗಳ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 429 ಬಿಎಂಎಸ್ 2014 ದಿನಾಂಕ:04.09.2014ರಲ್ಲಿ ಪೂರ್ಣ ಶುಲ್ಕಗಳ ಪಾವತಿಯೊಂದಿಗೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಕಾರ್ಯಕ್ರಮದಡಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ವಿವಿಧ ಕೋರ್ಸ್ ಗಳಲ್ಲಿ 65%ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯ/ಶಿಕ್ಷಣ ಇಲಾಖೆಗಳು ಆಯಾ ಕೋರ್ಸ್‌ಗಳಿಗೆ ಸರ್ಕಾರಿ ಸಂಸ್ಥೆಗಳಿಗೆ ನಿಗದಿಪಡಿಸುವ ದರಗಳಲ್ಲಿ ಇತರೆ ಪೂರ್ಣ ಶುಲ್ಕಗಳನ್ನು ಪಾವತಿಸಿ ಅವರ ಶಿಕ್ಷಣವನ್ನು ಮುಂದುವರೆಸಲು ಅವಕಾಶ ಕಲ್ಪಿಸಲಾಗಿದೆ.

3) ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಯೋಜನೆಯಡಿಯಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲು ರೂ.2.50ಲಕ್ಷಗಳ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ. ವಿದ್ಯಾಸಿರಿ ಯೋಜನೆಯಡಿಯಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಸೀಟು ದೊರಕದ ಅರ್ಹರಿರುವ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ.1500/- ರಂತೆ, ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ.15000/-ಗಳ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

**ಸಂಖ್ಯೆ: ಹಿಂವಕ 588 ಬಿಎಂಎಸ್ 2022**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

C 81